**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಪಿ.ನಂಜುಂಡಿ ವಿಶ್ವಕರ್ಮ ಇವರು ರಾಜ್ಯದಲ್ಲಿ ಸಾವಿರಾರು ದೇವಸ್ಥಾನಗಳು ವಿಶ್ವಕರ್ಮ ಸಮಾಜದವರಿಂದ ನಿರ್ಮಾಣವಾಗಿದ್ದರೂ ಈ ಸಮಾಜದವರಿಗೆ ದೇವಸ್ಥಾನಗಳ ಆಡಳಿತ ಮಂಡಳಿಯಲ್ಲಿ ಅವಕಾಶ ಮಾಡಿಕೊಡದಿರುವ ಕುರಿತು ನಿಯಮ 72ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರ ಉತ್ತರ.**

**ಉತ್ತರ:-**

ರಾಜ್ಯದಲ್ಲಿರುವ ಒಂದು ಅಥವಾ ಹೆಚ್ಚು ಅಧಿಸೂಚಿತ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಅಧಿಸೂಚಿತ ಸಂಸ್ಥೆಗಳ ಒಟ್ಟು ವಾರ್ಷಿಕ ಆದಾಯವು ರೂ.25.00 ಲಕ್ಷಗಳನ್ನು ಮೀರಿದ್ದಲ್ಲಿ, ರಾಜ್ಯ ಧಾರ್ಮಿಕ ಪರಿಷತ್ತು ಮತ್ತು ವಾರ್ಷಿಕ ಆದಾಯವು ರೂ.25.00ಲಕ್ಷಗಳ ರೂಪಾಯಿಗಳನ್ನು ಮೀರದಿದ್ದಲ್ಲಿ, ಜಿಲ್ಲಾ ಧಾರ್ಮಿಕ ಪರಿಷತ್ತು 09 ಜನ ಸದಸ್ಯರನ್ನು ಮೀರದಂತೆ, ಒಂದು ವ್ಯವಸ್ಥಾಪನಾ ಸಮಿತಿಯನ್ನು ರಚಿಸಲು ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997ರ ಕಲಂ 25 ರಡಿಯಲ್ಲಿ ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ಅದರನ್ವಯ, ಸದರಿ ವ್ಯವಸ್ಥಾಪನಾ ಸಮಿತಿಗೆ ಈ ಕೆಳಗಿನವರನ್ನು ಸದಸ್ಯರನ್ನಾಗಿ ನೇಮಕಗೊಳಿಸಬೇಕಾಗಿರುತ್ತದೆ.

(i) ಒಂದು ದೇವಾಲಯದ ಸಂಬಂಧದಲ್ಲಿ ಪ್ರಧಾನ ಅರ್ಚಕ ಅಥವಾ ಅರ್ಚಕ.
(ii) ಅನುಸೂಚಿತ ಜಾತಿ ಅಥವಾ ಅನುಚೂಚಿತ ಬುಡಕಟ್ಟಿಗೆ ಸೇರಿದವರ ಪೈಕಿಯಿಂದ ಕೊನೇ ಪಕ್ಷ-ಒಬ್ಬರು.
(iii) ಇಬ್ಬರು ಮಹಿಳೆಯರು.
(iv) ಸಂಸ್ಥೆಯು ಇರುವ ಸ್ಥಳದಲ್ಲಿ ವಾಸಿಸುತ್ತಿರುವ ವ್ಯಕ್ತಿಗಳ ಪೈಕಿಯಿಂದ ಕೊನೇ ಪಕ್ಷ- ಒಬ್ಬರು- ಸದಸ್ಯರುಗಳನ್ನು ಹೊಂದಿರತಕ್ಕದ್ದು.
(v) ಸಾಮಾನ್ಯ ವರ್ಗಕ್ಕೆ ಸೇರಿದ ಇತರ ನಾಲ್ಕು ಸದಸ್ಯರುಗಳನ್ನು ಹೊಂದಿರತಕ್ಕದ್ದು.

ಅಧಿಸೂಚಿತ ಸಂಸ್ಥೆಗಳಿಗೆ ವ್ಯವಸ್ಥಾಪನಾ ಸಮಿತಿಯನ್ನು ಮೇಲಿನಂತೆ ಸಂದರ್ಭಾನುಸಾರ ರಾಜ್ಯ ಧಾರ್ಮಿಕ ಅಥವಾ ಜಿಲ್ಲಾ ಧಾರ್ಮಿಕ ಪರಿಷತ್ ವತಿಯಿಂದ ಕಾಯ್ದೆಯ ಸೆಕ್ಷನ್ 25 ಅಡಿಯಲ್ಲಿ ನೇಮಕ ಮಾಡಲಾಗುತ್ತಿದೆ. ವ್ಯವಸ್ಥಾಪನಾ ಸಮಿತಿಗೆ ಸದಸ್ಯರನ್ನು ಮೇಲ್ಕಂಡಂತೆ ನಿಗಧಿಪಡಿಸಿರುವ ಮೀಸಲಾತಿಯನ್ವಯ ನೇಮಕ ಮಾಡಬೇಕಾಗಿರುತ್ತದೆ. ನಿರ್ದಿಷ್ಟವಾಗಿ ವಿಶ್ವಕರ್ಮ ಸಮಾಜದ ಉಪಪಂಗಡದವರಿಗೆ ಅಥವಾ ವೈದಿಕ ಪರಂಪರೆಯನ್ನು ಹೊಂದಿರತಕ್ಕಂಥ ವಿಶ್ವ ಬ್ರಾಹ್ಮಣರಿಗೆ ಅಥವಾ ಇತರೆ ನಿರ್ದಿಷ್ಟ ಸಮುದಾಯವರಿಗೆ ನೇರವಾಗಿ ವ್ಯವಸ್ಥಾಪನಾ ಸಮಿತಿಯ ಸದಸ್ಯರನ್ನಾಗಿ ನೇಮಕ ಮಾಡಲು ಕಾಯ್ದೆಯಲ್ಲಿ ಅವಕಾಶವಿರುವುದಿಲ್ಲ.

ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ರ ಕಲಂ 25ರ ಅಡಿಯಲ್ಲಿ ಸಾಮಾನ್ಯ ವರ್ಗಕ್ಕೆ ಸೇರಿದ ಇತರೆ ನಾಲ್ಕು ಸದಸ್ಯರನ್ನು ವ್ಯವಸ್ಥಾಪನಾ ಸಮಿತಿಯಲ್ಲಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಿದ್ದು, ಸಾಮಾನ್ಯ ವರ್ಗದಲ್ಲಿ ವಿಶ್ವಕರ್ಮ ಸಮಾಜದ ವ್ಯಕ್ತಿಗಳಿಗೂ ಸದಸ್ಯತ್ವ ಪಡೆದುಕೊಳ್ಳಲು ಅವಕಾಶವಿರುತ್ತದೆ.

ಕಂಇ 78 ಮುಸಪ್ರ 2023

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು.